**ಕರ್ನಾಟಕ ಸರ್ಕಾರ**

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

---

**ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2017–18** **ದಿನಾಂಕ: 9–11–2017**

# ಪತ್ರಿಕಾ ಆಮಂತ್ರಣ

1. ಶಾಲಾಕ್ಯ ತಂತ್ರ ಸ್ನಾತಕೋತ್ತರ ವಿಭಾಗದ ರಾಷ್ಟ್ರೀಯ ಸಮ್ಮೇಳನ
"ಶಾಲಾಕ್ಯ ಪ್ರಬೋಧಿನಿ – 2017"

**ಉದ್ಘಾಟನೆ**

ಕೆ.ಆರ್. ರಮೇಶ್ ಕುಮಾರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

ದಿನಾಂಕ: 10–11–2017, ಶುಕ್ರವಾರ ಸಮಯ : ಬೆಳಿಗ್ಗೆ 11.00 ಗಂಟೆಗೆ.
ಸ್ಥಳ: ಶಿಕ್ಷಕರ ಸದನ, ಕೆ.ಜಿ. ರಸ್ತೆ, ಬೆಂಗಳೂರು.

**2. .ಪತ್ರಿಕಾಗೋಷ್ಠಿ:**

**ಡಿ.ಹೆಚ್. ಶಂಕರಮೂರ್ತಿ,**
**ಸಭಾಪತಿಯವರು, ಕರ್ನಾಟಕ ವಿಧಾನ ಪರಿಷತ್ತು,**

**ದಿನಾಂಕ: 10–11–2017, ಶುಕ್ರವಾರ,, ಟಿಥಿ: ಅಪರಾಹ್ನ 12–00 ಗಂಟೆಗೆ**
**ಸ್ಥಳ: ಕೊಠಡಿ ಸಂಖ್ಯೆ 106, ಮೊದಲನೆ ಮಹಡಿ, ವಿಧಾನ ಸೌಧ, ಬೆಂಗಳೂರು**

3. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಹಜರತ್ ಟಿಪ್ಪು ಸುಲ್ತಾನ್ ಜಯಂತಿ:

**ಉದ್ಘಾಟನೆ:**

ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

**ಘನ ಉಪಸ್ಥಿತಿ:**

ಡಿ.ಹೆಚ್. ಶಂಕರಮೂರ್ತಿ, ಸಭಾಪತಿಗಳು, ಕರ್ನಾಟಕ ವಿಧಾನ ಪರಿಷತ್,
ಕೆ.ಬಿ. ಕೋಳಿವಾಡ, ಸಭಾಧ್ಯಕ್ಷರು, ಕರ್ನಾಟಕ ವಿಧಾನಸಭೆ.

**ಅಧ್ಯಕ್ಷತೆ:**
ಆರ್. ರೋಷನ್ ಬೇಗ್, ನಗರಾಭಿವೃದ್ಧಿ ಹಾಗೂ ಹಜ್ ಸಚಿವರು.

ದಿನಾಂಕ: 10–11–2017, ಶುಕ್ರವಾರ ಸಮಯ : ಸಂಜೆ 6.30 ಗಂಟೆಗೆ.
ಸ್ಥಳ: ಬ್ಯಾಂಕ್ವೆಟ್‌ಹಾಲ್, ವಿಧಾನಸೌಧ, ಬೆಂಗಳೂರು.

# ಪತ್ರಿಕಾ ಪ್ರಕಟಣೆ

**ಸಂಖ್ಯೆ 277/397**

## "ಶಾಲಾಕ್ಯ ಪ್ರಬೋದಿನಿ – 2017"

**ಬೆಂಗಳೂರು, ನವೆಂಬರ್ 9, (ಕರ್ನಾಟಕ ವಾರ್ತೆ)**

**" ಸರ್ಕಾರಿ ಆಯುರ್ವೇದ ಮಹಾವಿದ್ಯಾಲಯ, ಬೆಂಗಳೂರು ಇದರ ಸುವರ್ಣ ಮಹೋತ್ಸವ ಅಂಗವಾಗಿ ನವೆಂಬರ್ 10 ಮತ್ತು 11 ರಂದು ಶಾಲಾಕ್ಯ ತಂತ್ರ ಸ್ನಾತಕೋತ್ತರ ವಿಭಾಗ ಇವರು ರಾಷ್ಟ್ರ ಮಟ್ಟದ ಆಯುರ್ವೆದ ಸಮ್ಮೇಳನ"ಶಾಲಾಕ್ಯ ಪ್ರಬೋಧಿನಿ–2017" ಹಮ್ಮಿಕೊಳ್ಳಲಾಗಿದೆ.**

**ಕಣ್ಣು, ಕಿವಿ, ಗಂಟಲು, ಮೂಗು ಮತ್ತು ಹಲ್ಲು ಇವುಗಳಿಗೆ ಸಂಬಂಧಿಸಿದ ಖಾಯಿಲೆಗಳಿಗೆ ಆಯುರ್ವೇದ ವೈದ್ಯ ಪದ್ಧತಿಯ ಚಿಕಿತ್ಸೆ ಬಗ್ಗೆ ಚರ್ಚೆ ಹಾಗೂ ಸುಲಭವಾಗಿ ಅಳವಡಿಸಿಕೊಳ್ಳಬಹುದಾದಂತಹ ಚಿಕಿತ್ಸಾ ವಿಧಾನಗಳ ವಿಶ್ಲೇಷಣೆ ನಡೆಯಲಿದ್ದು ದೇಶದ ವಿವಿಧ ಭಾಗಗಳಿಂದ ಸುಮಾರು ಒಂದು ಸಾವಿರ ವೈದ್ಯರುಗಳು, ಸ್ನಾತಕೋತ್ತರ ವಿದ್ಯಾರ್ಥಿಗಳು ಮತ್ತು ಸಂಶೋಧನಾ ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ. ಈ ಕುರಿತು ಸ್ಮರಣ ಸಂಚಿಕೆ ಸಹ ಬಿಡುಗಡೆ ಮಾಡಲಾಗುತ್ತದೆ.**

**ವಿಶೇಷವಾಗಿ ಆಯುರ್ವೇದ ವೈದ್ಯ ಪದ್ಧತಿಯ ಈ ರಾಷ್ಟ್ರಮಟ್ಟದ ಸಮ್ಮೇಳನ ಬೆಂಗಳೂರಿನ ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಇಪ್ಪತ್ತು ವರ್ಷಗಳ**

ನಂತರ ಆಯೋಜಿಸಲಾಗಿರುವುದು ಮಹತ್ವದ ವಿಚಾರ. ಸಮ್ಮೇಳನವನ್ನು ಶಿಕ್ಷಕರ ಸದನ ಕೆ.ಜಿ.ರಸ್ತೆ, ಬೆಂಗಳೂರು ಇಲ್ಲಿ ಆಯೋಜಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಎಸ್‌ಎಂ;ಜೆಡಿ:ಜಿಪಿಆರ್.

**ಸಂಖ್ಯೆ 278/398**

## ಅರ್ಹ ಅಭ್ಯರ್ಥಿಗಳ ಮೂಲ ದಾಖಲೆ ಪರಿಶೀಲನೆ

**ಬೆಂಗಳೂರು, ನವೆಂಬರ್ 9, (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗವು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ನಿರ್ದೇಶನಾಲಯದಲ್ಲಿನ ತಜ್ಞರು/ಹಿರಿಯ ವೈದ್ಯಾಧಿಕಾರಿಗಳ 1065 ಹುದ್ದೆಗಳಿಗೆ ಅರ್ಹರಾದ ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆಯನ್ನು ನವೆಂಬರ್ 20 ಮತ್ತು 21 ರಂದು ಬೆಳಿಗ್ಗೆ 9.30 ಗಂಟೆಗೆ ಮತ್ತು ಮದ್ಯಾಹ್ನ 2.30 ಗಂಟೆಗೆ ಹಾಗೂ ನವೆಂಬರ್ 22 ರ ಬೆಳಿಗ್ಗೆ 9.30 ಗಂಟೆಗೆ ಆಯೋಗದ ಕೇಂದ್ರ ಕಚೇರಿ ಬೆಂಗಳೂರು ಇಲ್ಲಿ ನಡೆಸಲಿದೆ.

ಅರ್ಹ ಅಭ್ಯರ್ಥಿಗಳ ಅರ್ಹತಾ ಪಟ್ಟಿಯನ್ನು ಆಯೋಗದ ವೆಬ್‌ಸೈಟ್ " http://kpsc.kar.nic.in" ರಲ್ಲಿ ಪ್ರಕಟಿಸಲಾಗಿದೆ. ಅಭ್ಯರ್ಥಿಗಳು ಸೂಚನಾ ಪತ್ರಗಳನ್ನು ಆಯೋಗದ ಅಂತರ್ಜಾಲದಿಂದ Application I.D. ಮತ್ತು ಜನ್ಮ ದಿನಾಂಕವನ್ನು ನಮೂದಿಸಿ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಸ್‌ಎಂ;ಜೆಡಿ:ಜಿಪಿಆರ್.

**ಸಂಖ್ಯೆ 279/398**

## ನವೆಂಬರ್ 11 ರಿಂದ 14 ರವರೆಗೆ
## ಮಕ್ಕಳ ಹಬ್ಬ ಮತ್ತು ಮಕ್ಕಳ ದಿನಾಚರಣೆ

**ಬೆಂಗಳೂರು, ನವೆಂಬರ್ 9, (ಕರ್ನಾಟಕ ವಾರ್ತೆ)**

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖಾ ವತಿಯಿಂದ ನವೆಂಬರ್ 11 ರಿಂದ 14 ರವರೆಗೆ ಮಕ್ಕಳ ಹಬ್ಬ ಮತ್ತು ಮಕ್ಕಳ ದಿನಾಚರಣೆಯ ಕಾರ್ಯಕ್ರಮವನ್ನು ಬಾಲಭವನ ಮತ್ತು ಕಬ್ಬನ್ ಉದ್ಯಾನವನದ ಆವರಣದಲ್ಲಿ ಏರ್ಪಡಿಸಲಾಗಿದೆ.

ಈ ಕಾರ್ಯಕ್ರಮವನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಖಾತೆ ಸಚಿವೆ ಶ್ರೀಮತಿ ಉಮಾಶ್ರೀ ಅವರು ಉದ್ಘಾಟಿಸಲಿದ್ದಾರೆ.

ನಾಲ್ಕು ದಿನಗಳ ಕಾಲ ಮಕ್ಕಳಿಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು, ಹಳ್ಳಿ ಆಟ, ಬೀದಿನಾಟಕ, ಚಿತ್ರಕಲಾ ಸ್ಪರ್ಧೆ, ಚಿತ್ರ ಸಂತೆ, ಫಲಪುಷ್ಪ ಪ್ರದರ್ಶನ ಇತ್ಯಾದಿಗಳನ್ನು ಆಯೋಜಿಸಲಾಗಿದೆ.

ನವೆಂಬರ್ 14 ರಂದು ಆಚರಿಸಲಾಗುವ ಮಕ್ಕಳ ದಿನಾಚರಣೆಯನ್ನು ಗೌರವಾನ್ವಿತ ರಾಜ್ಯಪಾಲರು ಉದ್ಘಾಟಿಸಲಿದ್ದಾರೆ.

ಈ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಶೌರ್ಯ ಪ್ರಶಸ್ತಿ, ಅಸಾಧಾರಣ ಪ್ರತಿಭೆಯುಳ್ಳ ಮಕ್ಕಳಿಗೆ ಪುರಸ್ಕಾರ, ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಉತ್ತಮ ಸೇವೆ ಸಲ್ಲಿಸಿದ ಸಂಸ್ಥೆ ಮತ್ತು ವ್ಯಕ್ತಿಗಳಿಗೆ ರಾಜ್ಯ ಪ್ರಶಸ್ತಿ ನೀಡಿ ಗೌರವಿಸಲಾಗುವುದು.

ಎಸ್‌ಎಂ;ಜೆಡಿ:ಜಿಪಿಆರ್.